ಅ) ರಾಜ್ಯದ ಎಲ್ಲಾ ಜಿಲ್ಲೆಗಳಲ್ಲೂ ಅಪೆಕ್ಸ್ ಬ್ಯಾಂಕಿನ ಶಾಖೆಗಳಿವೆಯೇ?

ಆ) ಇಲ್ಲದಿದ್ದಲ್ಲಿ ಎಲ್ಲಾ ಜಿಲ್ಲೆಗಳಲ್ಲಿ ಅಪೆಕ್ಸ್ ಬ್ಯಾಂಕಿನ ಶಾಖೆಗಳನ್ನು ತೆರೆಯಲಾಗಿದೆ. ಸರ್ಕಾರ ಈ ಬಗ್ಗೆ ಯೋಚಿಸಿದೆಯೇ?

ಇ) ಹಾಗಿದ್ದಲ್ಲಿ, ದಕ್ಷಿಣ ಕನ್ನಡ ಜಿಲ್ಲೆಯಲ್ಲೂ ತೆರೆಯುವ ಯೋಜನೆ ಮಾಡಲಾಗುತ್ತದೆ?

ಶ್ರೀ ಎಸ್.ಆರ್. ಮೋರೆ (ಸಹಕಾರ ರಾಜ್ಯ ಸಚಿವರು):

ಅ) ಇಲ್ಲ

ಆ) ಇಲ್ಲ

ಇ) ಇಲ್ಲ

ವಿಶ್ವವಿದ್ಯಾಲಯಗಳ ಪರೀಕ್ಷೆಗಳಲ್ಲಿ ಆಗುತ್ತಿರುವ ಅಕ್ರಮಗಳು.

2194 - ಶ್ರೀ ಬಿ.ಎಂ. ಇದಿನಬ್ಬ (ಉಳ್ಳಾಲ) : ಮಾನ್ಯ ಶಿಕ್ಷಣ ಮತ್ತು ಸಂಸದೀಯ ವ್ಯವಹಾರಗಳ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯದ ವಿಶ್ವವಿದ್ಯಾಲಯಗಳು ನಡೆಸುತ್ತಿರುವ ಪರೀಕ್ಷೆಗಳಲ್ಲಿ ಅಕ್ರಮಗಳು ಆಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೆ?

ಆ) 1988, 1989, 1990ರಲ್ಲಿ ಬಂದಿರುವ ಅಕ್ರಮಗಳ ಪ್ರಕರಣಗಳೆಷ್ಟು?

ಇ) ಇಂತಹ ಅಕ್ರಮಗಳನ್ನು ತಡೆಗಟ್ಟಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು?

ಶ್ರೀ ಎಂ. ವೀರಪ್ಪಮೊಯಿಲಿ (ಶಿಕ್ಷಣ ಮತ್ತು ಸಂಸದೀಯ ವ್ಯವಹಾರಗಳ ಸಚಿವರು)

ಅ) ಹೌದು.

ಆ)

ವಿಶ್ವವಿದ್ಯಾಲಯ	1988	1989	1990
ಬೆಂಗಳೂರು	1042	832	1243
ಮೈಸೂರು	987	583	704
ಗುಲ್ಬರ್ಗಾ	228	331	341
ಕರ್ನಾಟಕ	15	11	27
ಮಂಗಳೂರು	44	9	90

ಕುವೆಂಪು ವಿಶ್ವವಿದ್ಯಾನಿಲಯಕ್ಕೆ ಸಂಬಂಧಿಸಿದ ಮಾಹಿತಿಯನ್ನು ನಂತರ ಒದಗಿಸಲಾಗುವುದು.

ಇ) ಪರೀಕ್ಷೆಗಳಲ್ಲಿ ನಡೆಯುವ ಅಕ್ರಮಗಳನ್ನು ತಡೆಗಟ್ಟಲು ವಿಶ್ವವಿದ್ಯಾಲಯಗಳು ಜಾಗೃತದಳಗಳನ್ನು ರಚಿಸಿ ತಪ್ಪಿತಸ್ಥರಿಗೆ ದಂಡನೆಯನ್ನು ವಿಶ್ವವಿದ್ಯಾಲಯ ವಿಧಿಸುತ್ತದೆ.

ಪೆಟ್ರೋಲಿಗೆ ಸೀಮೆ ಎಣ್ಣೆ ಬೇರಕೆ

2274 - ಶ್ರೀ ಬಿ.ಎಂ. ಇದಿನಬ್ಬ (ಉಳ್ಳಾಲ) : ಮಾನ್ಯ ಆಹಾರ ಮತ್ತು ನಾಗರೀಕ ಸರಬರಾಜು ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಪೆಟ್ರೋಲ್ ಬೆಲೆ ಏರಿಕೆಯ ತರುವಾಯ ಪೆಟ್ರೋಲ್ ಬಂಕ್‌ಗಳವರು ಪೆಟ್ರೋಲ್ ಜೊತೆಗೆ ಸೀಮೆಎಣ್ಣೆ ಬೆರೆಸುತ್ತಿರುವ ವಿಚಾರ ಸರ್ಕಾರದ ಗಮನಕಕ್ಕೆ ಬಂದಿದೆಯೆ?

ಆ) ಈ ಕಲಬೆರಕೆಯ ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ವ್ಯಾಪಕವಾಗಿದ್ದು, ಇದನ್ನು ತಡೆಗಟ್ಟಲು ಸರ್ಕಾರ ಕೈಗೊಂಡ ಕ್ರಮಗಳೇನು?

ಇ) ಈ ಸಂದರ್ಭದಲ್ಲಿ ಪೆಟ್ರೋಲ್ ಸಾಗಿಸುವ ವಾಹನಗಳ ತನಿಖೆ ನಡೆಸಲಾಗುತ್ತಿದೆಯೆ?

ಈ) ಕಲಬೆರಕೆ ತಡೆಗಟ್ಟಲು ಅನಿರೀಕ್ಷಿತ ತನಿಖೆಯದಾಳಿಗೆ ಸರ್ಕಾರ ಕ್ರಮ ಕೈಗೊಂಡಿದೆಯೇ? ಹಾಗೂ ಈ ಬಗ್ಗೆ ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಯಾವುದಾದರೂ ಪ್ರಕರಣಗಳು ಬೆಳಕಿಗೆ ಬಂದಿದೆಯೆ?

ಉ) ಬಂದಿದ್ದಲ್ಲಿ ಈ ದಿಶೆಯಲ್ಲಿ ಕೈಗೊಂಡ ಕ್ರಮಗಳೇನು?

ಶ್ರೀ ಟಿ.ಎನ್. ನರಸಿಂಹಮೂರ್ತಿ (ಆಹಾರ ಮತ್ತು ನಾಗರೀಕ ಸರಬರಾಜು ಸಚಿವರು) :

ಅ) ಬಂದಿದೆ.

ಆ) ಆಹಾರ ಮತ್ತು ನಾಗರೀಕ ಸರಬರಾಜು ಇಲಾಖೆ ಹಾಗೂ ಆಹಾರ ನಾಗರೀಕ ಸರಬರಾಜು ಜಾರಿ ಇಲಾಖೆಯ ಅಧಿಕಾರಿಗಳು ಆಗಾಗ್ಗೆ ಅನಿರೀಕ್ಷಿತ ದಾಳಿಗಳನ್ನು ನಡೆಸಿ ಪ್ರಕರಣಗಳನ್ನು ಪತ್ತೆ ಹಚ್ಚಿ ಅಪಾದಿತರ ವಿರುದ್ಧ ಪ್ರಕರಣಗಳನ್ನು ಪತ್ತೆ ಹಚ್ಚಿ ಅಪಾದಿತರ ವಿರುದ್ಧ ಕಾನೂನು ಪ್ರಕಾರ ಕ್ರಮ ಕೈಗೊಳ್ಳುದರ ಮೂಲಕ ಈ ರೀತಿಯ ಅವ್ಯವಹಾರಗಳನ್ನು ತಡೆಗಟ್ಟುವ ಕ್ರಮ ತೆಗೆದುಕೊಳ್ಳುತ್ತಿದ್ದಾರೆ.

ಇ) ಹೌದು.

ಈ) ಹೌದು.

ಉ) ಈವರೆಗೆ 248 ದಾಳಿಗಳನ್ನು ನಡೆಸಿ 3412 ಲೀಟರ್ ಸೀಮೆಎಣ್ಣೆ 9393 ಲೀಟರ್ ಪೆಟ್ರೋಲ್ ಮತ್ತು 2974 ಲೀಟರ್ ಡೀಸೆಲ್‌ನ್ನು ವಶಪಡಿಸಿ ಕೊಳ್ಳಲಾಗಿದೆ. ಹಾಗೂ ಈ ಸಂಬಂಧದಲ್ಲಿ ಸಂಬಂಧಪಟ್ಟ ಅಧಿಕಾರಿಗಳು ಈ ರೀತಿಯ ಅವ್ಯವಹಾರಗಳನ್ನು ತಡೆಗಟ್ಟಲು ಹೆಚ್ಚಿನ ಕ್ರಮ ವಹಿಸುವಂತೆ ಸೂಕ್ತ ನಿರ್ದೇಶನ ನೀಡಲಾಗಿದೆ.

ಹೋಟೆಲ್ ತಿಂಡಿ, ಊಟದ ಬೆಲೆಗಳನ್ನು ಇಳಿಸುವ ಕುರಿತು

2193 - ಶ್ರೀ ಬಿ.ಎಂ. ಇದಿನಬ್ಬ (ಉಳ್ಳಾಲ) ಮಾನ್ಯ ಆಹಾರ ಮತ್ತು ನಾಗರೀಕ ಸರಬರಾಜು ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ.

ಅ) ರಾಜ್ಯದಲ್ಲಿ ಹೋಟೆಲ್‌ಗಳ ತಿಂಡಿ ಊಟದ ಬೆಲೆ ದಿನದಿನಕ್ಕೆ ದುಭಾರಿಯಾಗಿ ಜನಸಾಮಾನ್ಯರಿಗೆ ತುಂಬಾ ತೊಂದರೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಆ) ಹಾಗಿದ್ದಲ್ಲಿ, ಹೋಟೆಲ್ ತಿಂಡಿ ಮತ್ತು ಊಟದ ಬೆಲೆಗಳನ್ನು ಇಳಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳಾವುವು?

ಇ) ಹೋಟೆಲ್‌ಗಳಲ್ಲಿನ ಬೆಲೆಗಳನ್ನು ಕಾಲ ಕಾಲಕ್ಕೆ ತನಿಖೆ ಮಾಡುವ ಕಾರ್ಯಕ್ರಮ ಹಾಕಿಕೊಳ್ಳಲಾಗಿದೆಯೇ?

ಶ್ರೀ ಟಿ.ಎನ್. ನರಸಿಂಹಮೂರ್ತಿ (ಆಹಾರ ಮತ್ತು ನಾಗರೀಕ ಸರಬರಾಜು ಸಚಿವರು)

ಅ) ಬಂದಿದೆ.

ಆ) ಹೋಟೆಲ್ ತಿಂಡಿ, ಕಾಫಿ ಮತ್ತು ಊಟದ ಬೆಲೆಗಳನ್ನು ನಿಯಂತ್ರಿಸುವ ಬಗ್ಗೆ ಸರ್ಕಾರಕ್ಕೆ ಸಧ್ಯದಲ್ಲಿ ಕಾನೂನಿನಲ್ಲಿ ಯಾವುದೇ ವ್ಯವಸ್ಥೆ ಇರುವುದಿಲ್ಲ, ಆದರೆ ಸರ್ಕಾರದ ಆದೇಶ ಸಂಖ್ಯೆ. ಎಫ್‌ಟಿಡಿ:10:ಡಿಐಕಂ: 84 ದಿನಾಂಕ 07-07-85 ರಲ್ಲಿ ಹೋಟೆಲುಗಳಲ್ಲಿನ ತಿಂಡಿ ಪದಾರ್ಥಗಳ ಬೆಲೆಗಳನ್ನು ಪರಾಮರ್ಶಿಸುವ ಸಲುವಾಗಿ ಒಂದು ಸಮಿತಿಯನ್ನು ರಚಿಸಲಾಗಿದೆ. ಹೋಟೆಲ್ ವರ್ತಕರ ಸಂಘದ ಪ್ರತಿನಿಧಿಗಳನ್ನು